# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಸಾರ್ವಜನಿಕ ಸಂಪರ್ಕ ಇಲಾಖೆ

## ಪತ್ರಿಕಾ ಪ್ರಕಟಣೆ

ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ಕರಾರಸಾ ನಿಗಮವು, ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ದಿನಾಂಕ 22.12.2017 ರಿಂದ 23.12.2017ರವರೆಗೆ ಬೆಂಗಳೂರಿನಿಂದ ಈ ಕೆಳಕಂಡ ಸ್ಥಳಗಳಿಗೆ 500 ರಿಂದ 550 ಹೆಚ್ಚುವರಿ ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ನಂತರ ರಾಜ್ಯದ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ದಿನಾಂಕ: 25.12.2017ರಂದು ವಿಶೇಷ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುವುದು.

- ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆಸುಭ್ರಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗೀರ್, ಬೀದರ್, ತಿರುಪತಿ ಮುಂತಾದ ಸ್ಥಳಗಳಿಗೆ ವಿಶೇಷ ಕಾರ್ಯಾಚರಣೆ.
- ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಿಕೇರಿ ಮಾರ್ಗದ ಕಡೆ ಕಾರ್ಯಾಚರಣೆ.
- ತಮಿಳುನಾಡು ಮತ್ತು ಆಂಧ್ರಪ್ರದೇಶ/ತೆಲಂಗಾಣ ಕಡೆಗೆ ಅಂದರೆ ಮಧುರೈ, ಕುಂಬಕೋಣಂ, ತಿರುಚಿ, ಚೆನ್ನೈ, ಕೊಯಮತ್ತೂರ್ ತಿರುಪತಿ, ವಿಜಯವಾಡ, ಹೈದರಾಬಾದ್ ಮುಂತಾದ ಸ್ಥಳಗಳಿಗೆ ಹೋಗುವ ಪ್ರತಿಷ್ಠಿತ ಸಾರಿಗೆಗಳನ್ನು ಶಾಂತಿನಗರದಲ್ಲಿನ ಬೆಂಗಳೂರು ಕೇಂದ್ರ ಘಟಕ–4 ಮತ್ತು ಘಟಕ–2 ರ ಮುಂಭಾಗದಿಂದ ವಿಶೇಷ ಕಾರ್ಯಾಚರಣೆ ಮಾಡಲಾಗುವುದು.
- ಬೆಂಗಳೂರು ನಗರದ ಶ್ರೀ ಬಸವೇಶ್ವರ ಬಸ್ ನಿಲ್ದಾಣ, ವಿಜಯನಗರ, ಜಯನಗರ 4ನೇ ಬ್ಲಾಕ್, ಜಾಲಹಳ್ಳಿ ಕ್ರಾಸ್, ನವರಂಗ್(ರಾಜಾಜಿನಗರ), ಮಲ್ಲೇಶ್ವರಂ 18ನೇ ಅಡ್ಡ ರಸ್ತೆ, ಬನಶಂಕರಿ, ಜೀವನ್ ಭೀಮಾನಗರ, ಐಟಿಐ ಗೇಟ್, ಗಂಗಾನಗರ, ಕೆಂಗೇರಿ ಉಪನಗರ, ಮುಂತಾದ ಸ್ಥಳಗಳಿಂದ ಪ್ರಯಾಣಿಕರ ಒತ್ತಡಕ್ಕನುಗುಣವಾಗಿ ಶಿವಮೊಗ್ಗ, ದಾವಣಗೆರೆ, ತಿರುಪತಿ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ಕುಕ್ಕೇಸುಭ್ರಮಣ್ಯ, ಧರ್ಮಸ್ಥಳ ಮುಂತಾದ ಮಾರ್ಗಗಳಿಗೆ ಹೆಚ್ಚುವರಿ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆ.
- **ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.**
- **ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗಿರುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್‌ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸುವಂತೆ ಕೋರಲಾಗಿದೆ.**
- ಇ–ಟಿಕೇಟ್ ಬುಕ್ಕಿಂಗ್‌ನ್ನು www.ksrtc.in ವೆಬ್ ಸೈಟ್ ಮುಖಾಂತರ ಮಾಡಬಹುದಾಗಿದೆ.
- ಸಾರ್ವಜನಿಕ ಪ್ರಯಾಣಿಕರು ಬೆಂಗಳೂರು ನಗರದಲ್ಲಿರುವ 109, ರಾಜ್ಯದ ಇತರೆ ಸ್ಥಳಗಳಲ್ಲಿರುವ 301 ಹಾಗೂ ಅಂತರರಾಜ್ಯದಲ್ಲಿ 166 ಗಣಕೀಕೃತ ಬುಕಿಂಗ್ ಕೌಂಟರ್‌ಗಳ ಮೂಲಕ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಬಹುದಾಗಿದೆ.
- ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೇಟು ಕಾಯ್ದಿರಿಸಿದಲ್ಲಿ **ಶೇಕಡ 5** ರಷ್ಟು ರಿಯಾಯಿತಿ ನೀಡಲಾಗುವುದು ಹಾಗೂ ಹೋಗುವ & ಬರುವ ಪ್ರಯಾಣದ ಟಿಕೇಟ್‌ನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ **ಶೇಕಡ 10** ರಷ್ಟು ರಿಯಾಯಿತಿ ನೀಡಲಾಗುವುದು.
- ನೆರೆ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಗೋವಾ, ಮಹಾರಾಷ್ಟ್ರ ಹಾಗೂ ಪುದುಚೆರಿಯಲ್ಲಿ ಇರುವ ಪ್ರಮುಖ ನಗರಗಳಲ್ಲಿ ನಿಗಮದ ಮುಂಗಡ ಆಸನಗಳನ್ನು ಕಾಯ್ದಿರಿಸುವ ಕೌಂಟರ್‌ಗಳು ಇದ್ದು, ಇವುಗಳ ಮೂಲಕ ಸಹ ಮುಂಗಡವಾಗಿ ಆಸನಗಳನ್ನು ನಿಗಮದ ಸಾರಿಗೆಗಳಿಗೆ ಕಾಯ್ದಿರಿಸಬಹುದಾಗಿದೆ.
- ಕಾರ್ಯಾಚರಣೆ ಮಾಡಲಾಗುವ ಹೆಚ್ಚುವರಿ ಸಾರಿಗೆಗಳು, ಅವುಗಳು ಹೊರಡುವ ಸ್ಥಳ ಹಾಗೂ ವೇಳಾ ವಿವರಗಳನ್ನು ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಅಂತರ್‌ಜಾಲ ವ್ಯವಸ್ಥೆಯಲ್ಲಿ ಹಾಗೂ ಕರಾರಸಾ ನಿಗಮದ ವೆಬ್‌ಸೈಟ್‌ನಲ್ಲಿ ಸಾರ್ವಜನಿಕ ಮಾಹಿತಿಗಾಗಿ ಒದಗಿಸಲಾಗಿದೆ ಹಾಗೂ ಸದರಿ ಹೆಚ್ಚುವರಿ ಸಾರಿಗೆಗಳಲ್ಲಿ ಸಂಚರಿಸುವ ಪ್ರಯಾಣಿಕರು ಕಾಯ್ದಿರಿಸುವ ಮುಂಗಡ ಚೀಟಿಗಳಲ್ಲೂ ಕೂಡ ವಾಹನ ಹೊರಡುವ ಸ್ಥಳದ ವಿವರ ನಮೂದಿಸಲಾಗಿದೆ.
- ಅಲ್ಲದೇ, ನಿಗಮದ ಕಾರ್ಯಾಚರಣೆ ವ್ಯಾಪ್ತಿಯಲ್ಲಿನ ಎಲ್ಲಾ ತಾಲ್ಲೂಕು/ಜಿಲ್ಲಾ ಬಸ್ ನಿಲ್ದಾಣಗಳಿಂದ ಸಂಚಾರ ಒತ್ತಡಕ್ಕನುಗುಣವಾಗಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ ಮಾಡಲಾಗುವುದು.

**********